# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 378 (393)
ಸದಸ್ಯರ ಹೆಸರು : ಡಾ:ವೈ ಎ ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ).
ಉತ್ತರಿಸುವ ದಿನಾಂಕ : 10.07.2023
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರರಿಗೆ "ಆರೋಗ್ಯ ವಿಮಾ ಯೋಜನೆ" ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| (ಆ) | ಇದರಿಂದಾಗಿ ಬೋಧಕ/ಬೋಧಕೇತರರಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| (ಇ) | ಸದರಿಯವರಿಗೂ "ಆರೋಗ್ಯ ಸಂಜೀವಿನಿ ಯೋಜನೆ" ಯನ್ನು ವಿಸ್ತರಿಸದಿರಲು ಕಾರಣಗಳೇನು? | ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ-1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (Classification, Regulation and Prescrition of Curricula) ನಿಯಮಗಳು-1995ರ ವ್ಯಾಪ್ತಿಗೆ ಒಳಪಡುತ್ತಾರೆ ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ. ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು-1963ರ ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ-ii (3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಾಗಿರುವುದಿಲ್ಲ. ಆದುದರಿಂದ ಅನುದಾನಿತ ಸಿಬ್ಬಂದಿಗಳು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ಬರುವುದಿಲ್ಲ. |
| (ಈ) | ಯಾವ ಕಾಲಮಿತಿಯಲ್ಲಿ "ಆರೋಗ್ಯ ಸಂಜೀವಿನಿ ಯೋಜನೆ"ಯನ್ನು ವಿತರಿಸಲಾಗುವುದು? | |

ಸಂಖ್ಯೆ: ಇಪಿ 273 ಎಸ್ಇಎಸ್ 2023

(ಎಸ್.ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು